**ಕರ್ನಾಟಕ ಸರ್ಕಾರ**

**ಕಾಲೇಜು ಶಿಕ್ಷಣ ಇಲಾಖೆ**

ದೂರವಾಣಿ:080-22343980

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಬೆಂಗಳೂರು,ದಿನಾಂಕ:26.04.2018.

ಸಂಖ್ಯೆ:ಕಾಶಿಇ/ಶೈವಿ/200/ಕ.ರಾ.ಮು.ವಿ.ವಿ/2017-18

**ನೆನಪೋಲೆ**

**ಇವರಿಗೆ.**

**ಸಂಬಂಧಪಟ್ಟ ಕಾಲೇಜುಗಳ ಪ್ರಾಂಶುಪಾಲರುಗಳಿಗೆ**

**ಮಾನ್ಯರೆ.**

**ವಿಷಯ:** ರಾಜ್ಯದ ಕೆಲವು ಕಾಲೇಜುಗಳನ್ನು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಅಧ್ಯಯನ ಕೇಂದ್ರಗಳಾಗಿ ಕರ್ತವ್ಯ ನಿರ್ವಹಿಸಲು ಅನುಮತಿ ನೀಡುವ ಬಗ್ಗೆ.

**ಉಲ್ಲೇಖ:**
1. ಕುಲಪತಿಗಳು, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ ಮೈಸೂರು ಇವರ ಪತ್ರ ಸಂಖ್ಯೆ:ಕರಾಮುವಿ/ ವಿಸಿಪಿಎಸ್/05/2018-19, ದಿನಾಂಕ: 01.02.2018, ಮತ್ತು 25.04.2018.
2. ಈ ಕಛೇರಿ ಸಮಸಂಖ್ಯೆ ಪತ್ರ ಸಂಖ್ಯೆ:08-03-2018

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ ಅಧ್ಯಯನ ಕೇಂದ್ರಗಳಗಾಗಿ ಅನುಕೂಲವಿರುವ ಕೆಲವು ಸರ್ಕಾರಿ ಪದವಿ ಕಾಲೇಜುಗಳಲ್ಲಿ ಶೈಕ್ಷಣಿಕ ಚಟುವಟಿಕೆಗಳನ್ನು ನಡೆಸಲು ಅದ್ಯಯನ ಕೇಂದ್ರಗಳಾಗಿ ಗುರುತಿಸಿರುವ 39 ಸರ್ಕಾರಿ ಕಾಲೇಜಿನ ಪ್ರಾಂಶುಪಾಲರಿಗೆ ಆದೇಶ ನೀಡಲು ಉಲ್ಲೇಖ-(1)ರಲ್ಲಿ ಕೋರಿರುತ್ತಾರೆ.

ಈ ಸಂಬಂಧ, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಕುಲಪತಿಗಳು ವಿಶ್ವವಿದ್ಯಾಲಯ ಅಧ್ಯಯನ ಕೇಂದ್ರಗಳಾಗಿ 39 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳನ್ನು ಗುರುತಿಸಿ ಆಯ್ಕೆ ಮಾಡಿಕೊಂಡಿದ್ದು, ಸದರಿ ಕಾಲೇಜುಗಳಲ್ಲಿ ಒಂದು ಕೊಠಡಿಯನ್ನು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಅಧ್ಯಯನ ಕೇಂದ್ರಕ್ಕಾಗಿ ನೀಡಲು ಕೋರಿರುವ ಹಿನ್ನಲೆಯಲ್ಲಿ ತಮ್ಮ ಕಾಲೇಜುಗಳಲ್ಲಿನ ಒಂದು ಕೊಠಡಿಯನ್ನು ಅಧ್ಯಯನ ಕೇಂದ್ರಕ್ಕಾಗಿ ನೀಡುವ ಬಗ್ಗೆ ತಮ್ಮ ಸ್ಪಷ್ಟ ಅಭಿಪ್ರಾಯದೊಂದಿಗೆ ವರದಿಯನ್ನು ಸಲ್ಲಿಸುವಂತೆ ಉಲ್ಲೇಖ-(2)ರಲ್ಲಿ ಈಗಾಗಲೇ ಸೂಚಿಸಲಾಗಿತ್ತು, ಆದರೆ ಈದುವರೆವಿಗೂ ತಮ್ಮಿಂದ ಈ ಬಗ್ಗೆ ಯಾವುದೇ ಅಭಿಪ್ರಾಯ/ವರದಿಯು ಈ ಕಛೇರಿಯಲ್ಲಿ ಸ್ವೀಕೃತಗೊಂಡಿರುವುದಿಲ್ಲ ಆದ್ದರಿಂದ ಕೂಡಲೇ ಗಮನಹರಿಸಿ ಸ್ಪಷ್ಟ ಅಭಿಪ್ರಾಯದೊಂದಿಗೆ ವರದಿಯನ್ನು ಜರೂರಾಗಿ ಸಲ್ಲಿಸುವಂತೆ ಮತ್ತೊಮ್ಮೆ ಸೂಚಿಸಲಾಗಿದೆ.

**ಅಡಕ:ಕಾಲೇಜುಗಳ ಪಟ್ಟಿ ಲಗತ್ತಿಸಿದೆ. ಹಾಗೂ ಉಲ್ಲೇಖಿತ ಪತ್ರ**

ತಮ್ಮ ವಿಶ್ವಾಸಿ

**ಕಾಲೇಜು ಶಿಕ್ಷಣ ನಿರ್ದೇಶಕರು**

ಪ್ರತಿಯನ್ನು:

1. ಕುಲಪತಿಗಳು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಮುಕ್ತಗಂಗೋತ್ರಿ, ಮೈಸೂರು-570 006.-.
2. ಮಾಹಿತಿ ಅಧಿಕಾರಿಗಳು ಕಾಲೇಜು ಶಿಕ್ಷಣ ಇಲಾಖೆ, ಕೇಂದ್ರ ಕಛೇರಿ, ಬೆಂಗಳೂರು ಸದರಿ ವಿವರವನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು
3. ಕಛೇರಿ ಪ್ರತಿ.